# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2133
2. ಮಾನ್ಯ ಸದಸ್ಯರ ಹೆಸರು : ಶ್ರೀ ಶಶೀಲ್ ಜಿ. ನಮೋಶಿ
3. ಉತ್ತರಿಸುವ ದಿನಾಂಕ : 25.03.2026
4. ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಪ್ರಸ್ತುತ ಕಂದಾಯ ಇಲಾಖೆಯಲ್ಲಿ ಮಂಜೂರಾಗಿರುವ ಖಾಲಿಯಿರುವ ಭರ್ತಿ ಮಾಡಿಕೊಳ್ಳಲಾದ ಹಾಗೂ ಆರ್ಥಿಕ ಇಲಾಖೆಯಿಂದ ಹೊಸದಾಗಿ ನೇಮಕಾತಿ ಮಾಡಿಕೊಳ್ಳಲು ಅನುಮೋದನೆ ಪಡೆಯಲಾದ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)</td><td>ಕಂದಾಯ ಇಲಾಖೆಯಲ್ಲಿ ಮಂಜೂರಾಗಿರುವ, ಖಾಲಿ ಇರುವ ಮತ್ತು ಭರ್ತಿಯಾಗಿರುವ ಹುದ್ದೆಗಳ ವಿವರ ಈ ಕೆಳಕಂಡಂತಿರುತ್ತದೆ.<br><table>
<tr><th>ಕ್ರ.ಸಂ.</th><th>ವೃಂದ</th><th>ಮಂಜೂರು</th><th>ಭರ್ತಿ</th><th>ಖಾಲಿ</th></tr>
<tr><td>1.</td><td>ಗ್ರೂಪ್-ಎ</td><td>335</td><td>74</td><td>261</td></tr>
<tr><td>2.</td><td>ಗ್ರೂಪ್-ಬಿ</td><td>483</td><td>398</td><td>85</td></tr>
<tr><td>3.</td><td>ಗ್ರೂಪ್-ಸಿ</td><td>18485</td><td>15543</td><td>2942</td></tr>
<tr><td>4.</td><td>ಗ್ರೂಪ್-ಡಿ</td><td>3080</td><td>1387</td><td>1693</td></tr>
</table></td></tr>
<tr><td>ಆ)</td><td>ಯಾವ ಯಾವ ಹುದ್ದೆಗಳ ನೇಮಕಾತಿಗಾಗಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ; ಆರ್ಥಿಕ ಇಲಾಖೆಯು ಎಷ್ಟು ಹುದ್ದೆಗಳ ನೇಮಕಾತಿಗೆ ಅನುಮೋದನೆ ನೀಡಿದೆ; ಹುದ್ದೆಗಳ ಪದನಾಮಗಳ ಸಮೇತ ಪೂರ್ಣ ಮಾಹಿತಿಯನ್ನು ಒದಗಿಸುವುದು;</td><td>ಪ್ರಥಮ ದರ್ಜೆ ಸಹಾಯಕರು/ ರಾಜಸ್ವ ನಿರೀಕ್ಷಕರು, ದ್ವಿತೀಯ ದರ್ಜೆ ಸಹಾಯಕರು ಮತ್ತು ಗ್ರಾಮ ಆಡಳಿತ ಅಧಿಕಾರಿ ವೃಂದಗಳಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿಗಾಗಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ತಹಶೀಲ್ದಾರ್ ಗ್ರೇಡ್-2 ವೃಂದದಲ್ಲಿ 76 ಹುದ್ದೆಗಳನ್ನು ಮತ್ತು ಗ್ರಾಮ ಆಡಳಿತ ಅಧಿಕಾರಿ ವೃಂದದಲ್ಲಿ 500 ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ.</td></tr>
<tr><td>ಇ)</td><td>ಪ್ರಸ್ತುತ ಕಂದಾಯ ಇಲಾಖೆಯಲ್ಲಿ ಖಾಲಿಯಿರುವ ಹಾಗೂ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದಿರುವ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ಸಂಖ್ಯೆ ಎಷ್ಟು;</td><td>ಪ್ರಸ್ತುತ 1115 ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳು ಖಾಲಿ ಇದ್ದು, 500 ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ.</td></tr>
<tr><td>ಈ)</td><td>ಪ್ರಸ್ತುತ ಕಂದಾಯ ಇಲಾಖೆಯಲ್ಲಿ ಮಂಜೂರಾಗಿರುವ ಭರ್ತಿಯಾಗಿರುವ ಹಾಗೂ ಆರ್ಥಿಕ ಇಲಾಖೆಯು ಹೊಸದಾಗಿ ನೇಮಕಾತಿ ಮಾಡಿಕೊಳ್ಳಲು ಅನುಮೋದನೆ ನೀಡಿರುವ ಉಪ ನೋಂದಣಾಧಿಕಾರಿಗಳ ಸಂಖ್ಯೆ ಎಷ್ಟು;</td><td>ಕಂದಾಯ ಇಲಾಖೆಯಲ್ಲಿ ಮಂಜೂರಾಗಿರುವ, ಖಾಲಿ ಇರುವ ಮತ್ತು ಭರ್ತಿಯಾಗಿರುವ ಉಪ ನೋಂದಣಾಧಿಕಾರಿ ಹುದ್ದೆಗಳ ವಿವರ ಈ ಕೆಳಕಂಡಂತಿರುತ್ತದೆ.<br><table>
<tr><th>ಮಂಜೂರು</th><th>ಭರ್ತಿ</th><th>ಖಾಲಿ</th></tr>
<tr><td>186</td><td>148</td><td>38</td></tr>
</table>ಹೊಸದಾಗಿ ಉಪ ನೋಂದಣಾಧಿಕಾರಿ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿರುವುದಿಲ್ಲ.</td></tr>
<tr><td>ಉ)</td><td>ಗ್ರಾಮ ಆಡಳಿತ ಅಧಿಕಾರಿಗಳು ಹಾಗೂ ಉಪ ನೋಂದಣಾಧಿಕಾರಿಗಳ ಹುದ್ದೆಗಳ ನೇಮಕಾತಿ ಜವಾಬ್ದಾರಿಯನ್ನು ಯಾವ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲಾಗುವುದು; ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪ್ರತಿ ಅರ್ಜಿಗೆ ರೂ.750/- ವಿಧಿಸುತ್ತಿರುವುದರಿಂದ ಅಭ್ಯರ್ಥಿಗಳಿಗೆ ಆರ್ಥಿಕ ಹೊರೆಯಾಗುತ್ತಿಲ್ಲವೇ; ಈ ಕುರಿತು ಸರ್ಕಾರ ಕೈಗೊಳ್ಳಬಹುದಾದ ನಿಲುವನ್ನು ಸ್ಪಷ್ಟ ಪಡಿಸುವುದು;</td><td>ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗ/ ಕರ್ನಾಟಕ ಪರೀಕ್ಷಾ ಪ್ರಾಧಿಕಾರ/ ಕೇಂದ್ರ ಅಥವಾ ರಾಜ್ಯ ಸರ್ಕಾರದ ಅಧೀನದಲ್ಲಿ ಬರುವ ಇತರ ಪರೀಕ್ಷಾ ಪ್ರಾಧಿಕಾರಗಳ ಮೂಲಕ ಹಾಗೂ ಉಪ ನೋಂದಣಾಧಿಕಾರಿ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡಲಾಗುವುದು.<br><br>ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪ್ರತಿ ಅರ್ಜಿಗೆ ರೂ.750/- ವಿಧಿಸುತ್ತಿರುವುದರಿಂದ ಅಭ್ಯರ್ಥಿಗಳಿಗೆ ಆರ್ಥಿಕ ಹೊರೆಯಾಗುತ್ತಿರುವ ಬಗ್ಗೆ ಯಾವುದೇ ದೂರು/ಮನವಿ ಕಂದಾಯ ಇಲಾಖೆಯಲ್ಲಿ ಸ್ವೀಕೃತವಾಗಿರುವುದಿಲ್ಲ.</td></tr>
</table>

| | | |
|---|---|---|
| ಊ) | ಸರ್ಕಾರವು ಅಧಿಕೃತವಾಗಿ ಮಾಹಿತಿ ನೀಡಿರುವ ಪ್ರಕಾರ ಮುಂಬರುವ ನೇಮಕಾತಿಗಾಗಿ ಕಂದಾಯ ಇಲಾಖೆಯಿಂದ ಅಧಿಸೂಚನೆ ಹೊರಡಿಸಬಹುದಾದ ಹಾಗೂ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದಿರುವ ಕಲ್ಯಾಣ ಕರ್ನಾಟಕ ಮತ್ತು ಉಳಿಕೆ ವೃಂದದ ಹುದ್ದೆಗಳು ಯಾವುವು; ಎಲ್ಲಾ ಹುದ್ದೆಗಳ ಪದನಾಮಗಳ ಸಮೇತ ಮಾಹಿತಿಯನ್ನು ಒದಗಿಸುವುದು? | ಉಪ ಪ್ರಶ್ನೆ (ಅ) ಮತ್ತು (ಆ)ಗೆ ನೀಡಿರುವ ಮಾಹಿತಿಯಂತೆ ಆರ್ಥಿಕ ಇಲಾಖೆಯು ಅನುಮೋದನೆ ನೀಡಿರುವ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮವಹಿಸಲು ಪರಿಶೀಲಿಸಲಾಗುವುದು. |

ಸಂಖ್ಯೆ: ಕಂಇ 52 ಬಿಎಸ್ ಸಿ 2026

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು